# All India Radio: Bangalore
# Regional Bulletin In Kannada
# 26.06.2026 / 2.30 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಬಂಡೀಪುರ, ನಾಗರಹೊಳೆ, ಜಂಗಲ್ ಸಫಾರಿ ಪೂರ್ಣ ಪ್ರಮಾಣದಲ್ಲಿ ಆರಂಭಿಸಲು ರಾಜ್ಯ ಸರ್ಕಾರ ಆದೇಶ
- ಅನುಮತಿ ಇಲ್ಲದೇ ಖಾಸಗಿ ಚಿತ್ರ, ವಿಡಿಯೋ ಪ್ರಸಾರಕ್ಕೆ ನಿರ್ಬಂಧ : ಕಡ್ಡಾಯ ಎಫ್ಐಆರ್ ದಾಖಲಿಸಲು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಸೂಚನೆ
- ಬಿಡದಿ ಟೌನ್‌ಶಿಪ್ ವಿಚಾರದಲ್ಲಿ ರೈತರ ಸಮಸ್ಯೆ ಬಗೆಹರಿಸಲು ಮಧ್ಯ ಪ್ರವೇಶ : ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಸ್ಪಷ್ಟನೆ
- ಕೆಪಿಟಿಸಿಎಲ್ ನಿಂದ ವಿದ್ಯುತ್ ಪ್ರಸರಣ ಮಾರ್ಗಗಳ ತಪಾಸಣೆಗೆ ಡ್ರೋನ್ ತಂತ್ರಜ್ಞಾನ ಬಳಕೆ ; ವಿದ್ಯುತ್ ವ್ಯತ್ಯಯದಲ್ಲಿ ಶೇಕಡ ಆರರಷ್ಟು ಕಡಿತ
- ತೆರಿಗೆ ಸಂಗ್ರಹ ಹಾಗೂ ಅಬಕಾರಿ ಇಲಾಖೆ ಅಧಿಕಾರಿಗಳೊಂದಿಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪ್ರಗತಿ ಪರಿಶೀಲನಾ ಸಭೆ

<><><><>

ತಜ್ಞರು ಮತ್ತು ಅಧಿಕಾರಿಗಳ ತಾಂತ್ರಿಕ ಸಮಿತಿಯ ವರದಿ ಶಿಫಾರಸ್ಸಿನ ಅನ್ವಯ ಬಂಡೀಪುರ ಮತ್ತು ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದಲ್ಲಿ ಪೂರ್ಣ ಪ್ರಮಾಣದಲ್ಲಿ ಜಂಗಲ್ ಸಫಾರಿ ಪುನರಾರಂಭಿಸಲು ರಾಜ್ಯ ಸರ್ಕಾರ ನಿರ್ಧರಿಸಿದೆ. ಈ ಬಗ್ಗೆ ತಾಂತ್ರಿಕ ಸಮಿತಿಯ ವರದಿಯನ್ನು ಅಂಗೀಕರಿಸಲಾಗಿದ್ದು, ವೈಜ್ಞಾನಿಕ ಮೌಲ್ಯಮಾಪನದ ಬಳಿಕ ಪರಿಣಾಮಕಾರಿ ಸಾಗಣೆ ಸಾಮರ್ಥ್ಯದ ಆಧಾರದ ಮೇಲೆ ಜಂಗಲ್ ಸಫಾರಿಗೆ ಹಸಿರು ನಿಶಾನೆ ನೀಡಲಾಗಿದೆ. ಪರಿಸರ ವ್ಯವಸ್ಥೆಯ ಸಮಗ್ರತೆಯನ್ನು ರಕ್ಷಿಸುವ ಜೊತೆಗೆ ವನ್ಯಜೀವಿ ಸಂರಕ್ಷಣೆ, ಸ್ಥಳೀಯರ ಜೀವನೋಪಾಯ ಮತ್ತು ಪ್ರವಾಸಿಗರ ಉತ್ತಮ ಅನುಭವಕ್ಕೆ ಪೂರಕವಾದ ಪರಿಸರ

ಪ್ರವಾಸೋದ್ಯಮಕ್ಕೆ ರಾಜ್ಯ ಸರ್ಕಾರ ಬದ್ಧವಾಗಿದೆ ಎಂದು ಮುಖ್ಯಮಂತ್ರಿ ಕಚೇರಿಯ ಮಾಧ್ಯಮ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

<><><>

ಯಾವುದೇ ವ್ಯಕ್ತಿಯ ಅನುಮತಿ ಇಲ್ಲದೇ ಖಾಸಗಿ ಚಿತ್ರ ಅಥವಾ ವಿಡಿಯೋ ಪ್ರಸಾರ ಮಾಡುವ ಪ್ರಕರಣಗಳನ್ನು ಸರ್ಕಾರ ಅತ್ಯಂತ ಗಂಭೀರವಾಗಿ ಪರಿಗಣಿಸಿದೆ. ಈ ಕುರಿತಂತೆ ಎಫ್‌ಐಆರ್ ದಾಖಲಿಸಲು ಹಾಗೂ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಗೃಹ ಸಚಿವ ಪ್ರಿಯಾಂಕ್ ಖರ್ಗೆ, ಎಲ್ಲಾ ಪೊಲೀಸ್ ಆಯುಕ್ತರು ವಲಯ ಐಜಿಪಿಗಳು ಮತ್ತು ಪೊಲೀಸ್ ಅಧೀಕ್ಷಕರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ. ಸಂತ್ರಸ್ತರು ವಿಡಿಯೋ ಅಥವಾ ಚಿತ್ರ ಸೆರೆ ಹಿಡಿಯಲು ಒಪ್ಪಿಗೆ ನೀಡಿದ್ದರೂ ಪ್ರಸಾರ ಮಾಡಲು, ಒಪ್ಪಿಗೆ ಇರದೇ ಇದ್ದ ಪಕ್ಷದಲ್ಲಿ ಅದನ್ನು ಪ್ರಚಾರ ಪಡಿಸುವುದು ಸಂಜ್ಞೆಯ ಅಪರಾಧವಾಗಲಿದೆ. ಬ್ಲಾಕ್‌ಮೇಲ್ ವಿಡಿಯೋಗಳು ಮತ್ತು ದ್ವೇಷಪೂರಿತ ಅಶ್ಲೀಲ ವಿಡಿಯೋಗಳು ಎಂದು ಕರೆಯಲ್ಪಡುವ ಪ್ರಕರಣಗಳಲ್ಲಿ ಕಡ್ಡಾಯವಾಗಿ ಎಫ್‌ಐಆರ್ ದಾಖಲಿಸುವಂತೆ ಪೊಲೀಸ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಮೊದಲ ಅಪರಾಧಕ್ಕೆ ಒಂದು ರಿಂದ ಮೂರು ವರ್ಷ ಹಾಗೂ ಪುನರಾವರ್ತಿತ ಅಪರಾಧಕ್ಕೆ ೩ ರಿಂದ ೭ ವರ್ಷ ಜೈಲು ಶಿಕ್ಷೆ ಮತ್ತು ದಂಡ ವಿಧಿಸಲು ನಿರ್ಧರಿಸಲಾಗಿದೆ. ಈ ಮೂಲಕ ಸಂವಿಧಾನಬದ್ಧ ಖಾಸಗಿತನದ ಹಕ್ಕನ್ನು ಮತ್ತಷ್ಟು ಬಲಪಡಿಸುವುದರ ಜೊತೆಗೆ ರಾಜ್ಯದ ಎಲ್ಲಾ ಪೊಲೀಸ್ ಠಾಣೆಗಳಲ್ಲಿ ಸಂತ್ರಸ್ತರ ಪರ ಕಾನೂನುಬದ್ಧ ಹಾಗೂ ಏಕರೂಪದ ಕ್ರಮವನ್ನು ಖಚಿತಪಡಿಸಲಿದೆ.

<><><>

ಬಿಡದಿಯ ಪ್ರಸ್ತಾವಿತ ಗ್ರೇಟರ್ ಬೆಂಗಳೂರು ಇಂಟಿಗ್ರೇಟೆಡ್ ಟೌನ್‌ಶಿಪ್ ಯೋಜನೆಗೆ ಸಂಬಂಧಿಸಿದಂತೆ ರೈತರೊಂದಿಗೆ ಮಾತುಕತೆ ನಡೆಸಲು ನಾಳೆ ಮುಖ್ಯಮಂತ್ರಿ ಆಗಮಿಸುವವರೆಗೆ ಕಾಯುವುದಾಗಿ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಂಗಳೂರು ನಗರದ ಅಭಿವೃದ್ಧಿಗೆ ಅಡ್ಡಿಯಾಗಲು ಬಯಸುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಭೂಸ್ವಾದೀನಕ್ಕೆ ರೈತರ ಆಕ್ಷೇಪ ಇಲ್ಲದಿದ್ದರೇ ನನಗೂ ಯಾವುದೇ ಆಕ್ಷೇಪ ಇಲ್ಲ ಎಂದು ಹೇಳಿದ್ದಾರೆ. ರೈತರ ಸಮಸ್ಯೆ ಬಗೆಹರಿಸಲು ಬಿಡದಿ ಟೌನ್‌ಶಿಪ್ ವಿಚಾರದಲ್ಲಿ ಮಧ್ಯ ಪ್ರವೇಶಿಸಿರುವುದಾಗಿ ತಿಳಿಸಿದ್ದಾರೆ. ರೈತರು ವಿರೋಧ ವ್ಯಕ್ತಪಡಿಸುತ್ತಿದ್ದರೂ

ಸರ್ಕಾರ ಬಿಡದಿ ಟೌನ್‌ಶಿಪ್ ಯೋಜನೆಯನ್ನು ಯಾಕೆ ಮುಂದುವರಿಸುತ್ತಿದೆ ಎಂದು ಕುಮಾರಸ್ವಾಮಿ ಪ್ರಶ್ನಿಸಿದ್ದಾರೆ.

<><><>

ಹೈವೋಲ್ಟೇಜ್ ಮತ್ತು ಎಕ್ಸ್‌ಟ್ರೀಮ್ ಹೈವೋಲ್ಟೇಜ್ ವಿದ್ಯುತ್ ಪ್ರಸರಣ ಮಾರ್ಗಗಳ ತಪಾಸಣೆಯಲ್ಲಿ ಸಿಬ್ಬಂದಿ ವರ್ಗದ ಸುರಕ್ಷತೆಯನ್ನು ಹೆಚ್ಚಿಸುವ ಹಾಗೂ ನಿಖರತೆಯನ್ನು ಕಾಯ್ದುಕೊಳ್ಳುವ ನಿಟ್ಟಿನಲ್ಲಿ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ-ಕೆಪಿಟಿಸಿಎಲ್ ಅತ್ಯಾಧುನಿಕ ಡ್ರೋನ್ ತಂತ್ರಜ್ಞಾನದ ಮೂಲಕ ೧೧ ಸಾವಿರಕ್ಕೂ ಹೆಚ್ಚು ಟವರ್‌ಗಳನ್ನು ತಪಾಸಣೆ ನಡೆಸಿದೆ. ಒಂದೂವರೆ ಲಕ್ಷಕ್ಕೂ ಹೆಚ್ಚು ತಾಂತ್ರಿಕ ಸಮಸ್ಯೆಗಳನ್ನು ಗುರುತಿಸಿ ಅದನ್ನು ಸರಿಪಡಿಸಲಾಗಿದೆ ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ತಿಳಿಸಿದ್ದಾರೆ. ಡ್ರೋನ್ ತಪಾಸಣೆಯಿಂದಾಗಿ ಶೇಕಡ ೮೫ರಷ್ಟು ವಿದ್ಯುತ್ ವ್ಯತ್ಯಯ ಕಡಿತವಾಗಿದೆ. ಸಂಭವ್ಯ ಮತ್ತು ನಿರ್ಣಾಯಕ ಸಮಸ್ಯೆಗಳನ್ನು ವಿದ್ಯುತ್ ಕಡಿತಗೊಳ್ಳುವ ಮುನ್ನವೇ ಪತ್ತೆ ಹಚ್ಚಲಾಗಿದೆ. ಅಧಿಕಾರಿಗಳು ಹಾಗೂ ಸಿಬ್ಬಂದಿ ಮೊಬೈಲ್ ಆಪ್ ಮೂಲಕವೇ ನೈಜ ಸಮಯದಲ್ಲಿ ಸಮಸ್ಯೆಯನ್ನು ಪತ್ತೆಹಚ್ಚಲು ಸಾಧ್ಯವಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ನೂತನ ತಂತ್ರಜ್ಞಾನದ ಮೂಲಕ ರೈತರು, ಕೈಗಾರಿಕೆಗಳು ಮತ್ತು ಸಾರ್ವಜನಿಕರಿಗೆ ನಿರಂತರ ವಿದ್ಯುತ್ ಪೂರೈಕೆಯನ್ನು ಖಾತರಿಪಡಿಸುವದರ ಜೊತೆಗೆ ಲೈನ್‌ಮೆನ್‌ಗಳ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ ಎಂದು ಕೆಪಿಟಿಸಿಎಲ್ ವ್ಯವಸ್ಥಾಪಕ ನಿರ್ದೇಶಕ ಡಾ.ವಿ.ರಾಮಪ್ರಸಾತ್ ಮನೋಹರ್ ತಿಳಿಸಿದ್ದಾರೆ.

<><><>

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇಂದು ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ತೆರಿಗೆ ಸಂಗ್ರಹ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿದರು. ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ ಎಲ್.ಕೆ ಅತೀಕ್, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್, ಆರ್ಥಿಕ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ರಿತೇಶ್ ಕುಮಾರ್ ಸಿಂಗ್ ಹಾಗೂ ವಾಣಿಜ್ಯ ತೆರಿಗೆ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು. ಬಳಿಕ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಅಬಕಾರಿ ಇಲಾಖೆ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸಿದರು.

<><><>

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ನಾಳೆ ರಾಜ್ಯ ಪ್ರವಾಸ ಕೈಗೊಳ್ಳಲಿದ್ದು, ಬೆಂಗಳೂರು ನಗರ ವಿಶ್ವವಿದ್ಯಾನಿಲಯದಲ್ಲಿ ನಾಡಪ್ರಭು ಕೆಂಪೇಗೌಡ ಅವರ ೫೧೬ನೇ ಜಯಂತಿ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ.

ನಾಡಿದ್ದು, ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿರುವ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದ ೩೦ನೇ ಸಂಸ್ಥಾಪನಾ ದಿನಾಚರಣೆ ಹಾಗೂ ನಶಾಮುಕ್ತ ಭಾರತ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

<><><>

ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಇಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ರಾಜ್ಯ ರಾಜಕೀಯ ಕುರಿತಂತೆ ಮಾತುಕತೆ ನಡೆಸಿದರು. ಶಾಸಕರಾದ ಪೊನ್ನಣ್ಣ, ರಾಘವೇಂದ್ರ ಹಿಟ್ನಾಳ್, ಅಪ್ಪಾಜಿ ನಾಡಗೌಡ ಹಾಗೂ ಯಶವಂತ ರಾಯಗೌಡ ಅವರು ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಚರ್ಚೆ ನಡೆಸಿದರು.

<><><>

ನಮ್ಮ ಮೆಟ್ರೋದ ನೇರಳೆ ಮಾರ್ಗದ ಕಬ್ಬನ್‌ಪಾರ್ಕ್ ನಿಲ್ದಾಣದಲ್ಲಿ ನಿನ್ನೆ ಸಂಜೆ ರೈಲಿನ ಬಾಗಿಲು ಮುಚ್ಚದಿರುವುದಕ್ಕೆ ಬಿಎಂಆರ್‌ಸಿಎಲ್ ಸ್ಪಷ್ಟನೆ ನೀಡಿದೆ. ರೈಲಿನಲ್ಲಿ ಯಾವುದೇ ತಾಂತ್ರಿಕ ದೋಷ ಇರಲಿಲ್ಲ ಎಂದು ತಿಳಿಸಿರುವ ಬಿಎಂಆರ್‌ಸಿಎಲ್, ಪ್ರಾಥಮಿಕ ವರದಿಯಲ್ಲಿ ರೈಲಿನ ಬಾಗಿಲಿನ ಡೋರ್ ಗೈಡ್‌ವೇಯಲ್ಲಿ ಲೋಹದ ಸರ ಸಿಲುಕಿಕೊಂಡಿದ್ದರಿಂದ ರೈಲಿನ ಬಾಗಿಲುಗಳು ಸ್ವಯಂಚಾಲಿತವಾಗಿ ಮುಚ್ಚಲಿಲ್ಲ ಎಂದು ತಿಳಿಸಿದೆ. ಘಟನೆಯ ಬೆನ್ನಲ್ಲೇ ಬಿಎಂಆರ್‌ಸಿಎಲ್‌ನ ಕಾರ್ಯಾಚರಣೆ ಮತ್ತು ನಿರ್ವಹಣಾ ತಂಡಗಳು ಜಂಟಿಯಾಗಿ ಸಮಗ್ರ ಪ್ರಾಥಮಿಕ ತನಿಖೆ ನಡೆಸಿದ್ದು, ಘಟನೆಗೆ ಕಾರಣವಾದ ಹಿನ್ನೆಲೆಯನ್ನು ಬಹಿರಂಗಪಡಿಸಿದೆ.

<><><>

ರಾಜ್ಯದೆಲ್ಲೆಡೆ ಇಂದು ಅಶೂರ-ಎ-ಮೊಹರಂ ಹಬ್ಬವನ್ನು ಶ್ರದ್ಧಾಭಕ್ತಿಯಿಂದ ಆಚರಿಸಲಾಗುತ್ತಿದೆ. ತ್ಯಾಗ ಬಲಿದಾನದ ಸಂಕೇತವಾದ ಮೊಹರಂ ಹಬ್ಬವನ್ನು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ, ಹೊಸಕೋಟೆ, ದೇವನಹಳ್ಳಿ ಹಾಗೂ ನೆಲಮಂಗಲ ತಾಲೂಕುಗಳಲ್ಲಿ ಮುಸ್ಲಿಂ ಸಮುದಾಯದವರು ಶ್ರದ್ಧಾಭಕ್ತಿ ಸಡಗರದಿಂದ ಆಚರಿಸಿದರು. ದೊಡ್ಡಬಳ್ಳಾಪುರದ ಬಾಬಯ್ಯ ದೇವಾಲಯದಲ್ಲಿ ಕಳೆದ ರಾತ್ರಿ ಕೆಂಡ ಹಾರುವ ಆಚರಣೆ ನಡೆಯಿತು. ಜಿಲ್ಲೆಯ ಹೊಸಕೋಟೆ,

ಸೂಲಿಬೆಲೆಯಲ್ಲಿ ಬಾಬಯ್ಯನ ಜಾತ್ರಾ ಮಹೋತ್ಸವ ನಡೆಯಿತು. ಹಿಂದೂ ಮುಸ್ಲಿಮರ ಭಾವೈಕ್ಯತೆ ಬಿಂಬಿಸುವ ಮೊಹರಂ ಆಚರಣೆಯಲ್ಲಿ ಹಿಂದೂ ಸಮುದಾಯದವರು ಭಾಗವಹಿಸಿ ೧೦ ದಿನಗಳ ಹಬ್ಬವನ್ನು ವಿಜೃಂಭಣೆಯಿಂದ ಆಚರಿಸುವುದು ವಾಡಿಕೆ. ಕೋಲಾರ ಜಿಲ್ಲೆಯಲ್ಲಿಯೂ ಮೊಹರಂ ಹಬ್ಬವನ್ನು ಮುಸ್ಲಿಂ ಬಾಂಧವರು ಶ್ರದ್ಧಾಭಕ್ತಿಯಿಂದ ಆಚರಿಸುತ್ತಿದ್ದಾರೆ. ಹಬ್ಬದ ಅಂಗವಾಗಿ ಮುನ್ನೆಚ್ಚರಿಕೆ ಕ್ರಮವಾಗಿ ಕೋಲಾರದ ಕ್ಲಾಕ್ ಟವರ್ ನಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಕೈಗೊಳ್ಳಲಾಗಿದೆ.

<><><><>

ಭಾರತೀಯ ಚಾರ್ಟಡ್ ಅಕೌಂಟೆಂಟ್ಸ್ ಸಂಸ್ಥೆಯ ಜಿಲ್ಲಾ ಘಟಕ ಮತ್ತು ಬಳ್ಳಾರಿ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ ಜಂಟಿಯಾಗಿ ನಾಳೆ ಅಂತಾರಾಷ್ಟ್ರೀಯ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ದಿನಾಚರಣೆಯನ್ನು ಹಮ್ಮಿಕೊಂಡಿದೆ. ಕೌಶಲ್ಯ ಅಭಿವೃದ್ಧಿ ಸಚಿವ ಶರಣ ಪ್ರಕಾಶ್ ಪಾಟೀಲ್ ಕಾರ್ಯಕ್ರಮ ಉದ್ಘಾಟಿಸಲಿದ್ದು, ೪೦೦ ಜನ ಸೂಕ್ಷ್ಮ ಮೈಕ್ರೋ ಉದ್ದಿಮೆದಾರರು, ಸಾವಯವ ಕೃಷಿಕರು ಭಾಗವಹಿಸಲಿದ್ದಾರೆ. ರಾಷ್ಟ್ರೀಯ ಎಂಎಸ್‌ಎಂಇ ದಿನಾಚರಣೆ-೨೦೨೪ ಅಂಗವಾಗಿ ಗದಗ ಜಿಲ್ಲೆಯಲ್ಲಿ ಜಾಗೃತಿ ಅಭಿಯಾನಕ್ಕೆ ಗದಗ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಚಾಲನೆ ನೀಡಿದರು. ಎಂಎಸ್‌ಎಂಇ ಕ್ಷೇತ್ರವು ಉದ್ಯೋಗ ಸೃಷ್ಟಿ, ಉದ್ಯಮಶೀಲತೆ ಅಭಿವೃದ್ಧಿ ಹಾಗೂ ದೇಶದ ಆರ್ಥಿಕ ಬೆಳವಣಿಗೆಯಲ್ಲಿ ಪ್ರಮುಖ ಪಾತ್ರವಹಿಸುತ್ತಿದೆ. ನಾಳೆ ನಡೆಯುವ ಎಂಎಸ್‌ಎಂಇ ದಿನಾಚರಣೆಯಲ್ಲಿ ಉದ್ಯಮಿಗಳು ಹಾಗೂ ಸಾರ್ವಜನಿಕರು ಸಕ್ರಿಯವಾಗಿ ಭಾಗವಹಿಸುವಂತೆ ಅವರು ಕರೆ ನೀಡಿದರು.

<><><><>

ಸಂಕ್ಷಿಪ್ತ ಸುದ್ದಿಗಳು

1. ರಾಯಚೂರು ತಾಲೂಕಿನ ಕೂಡ್ಲೂರು ಗ್ರಾಮದಲ್ಲಿ ಪೋಷಕರು ಬಾಲಕಿಯ ಮದುವೆ ಮಾಡಲು ಮುಂದಾಗಿದ್ದ ಖಚಿತ ಮಾಹಿತಿಯೊಂದಿಗೆ ದಾಳಿ ನಡೆಸಿದ ಅಧಿಕಾರಿಗಳ ತಂಡ ಬಾಲ್ಯ ವಿವಾಹ ತಡೆದಿದ್ದಾರೆ. ಬಾಲಕಿಯನ್ನು ರಕ್ಷಣೆ ಮಾಡಿ ಸರ್ಕಾರಿ ಬಾಲಕಿಯರ ಬಾಲ ಮಂದಿರಕ್ಕೆ ಸೇರಿಸಲಾಗಿದೆ ಎಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

2. ಮಾದಕ ದ್ರವ್ಯಗಳ ವ್ಯಸನವು ಸಮಾಜಕ್ಕೆ, ಹಾಗೂ ಯುವ ಸಮುದಾಯದ ಭವಿಷ್ಯಕ್ಕೆ ಗಂಭೀರ ಸವಾಲಾಗಿದ್ದು, ಅದನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಪ್ರತಿಯೊಬ್ಬ ನಾಗರಿಕರೂ ಕೈಜೋಡಿಸಬೇಕು ಎಂದು ಯಾದಗಿರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್ ಕರೆ ನೀಡಿದ್ದಾರೆ.

3. ಚಿಕ್ಕಬಳ್ಳಾಪುರ ಜಿಲ್ಲೆ ಚಿಂತಾಮಣಿ ತಾಲ್ಲೂಕಿನ ಕೈವಾರದ ಶ್ರೀಯೋಗಿ ನಾರೇಯಣ ಮಠದಲ್ಲಿ ಗುರುಪೂರ್ಣಿಮೆ ಹಾಗೂ ಕಾಲಜ್ಞಾನಿ ಕೈವಾರ ತಾತಯ್ಯನವರ ೩೦೦ನೇ ಜಯಂತ್ಯೋತ್ಸವದ ಅಂಗವಾಗಿ ನಾಳೆಯಿಂದ ಮೂರು ದಿನಗಳ ಕಾಲ ರಾಷ್ಟ್ರಮಟ್ಟದ ಸಂಗೀತೋತ್ಸವ ಹಾಗೂ ಗುರುಪೂಜಾ ಮಹೋತ್ಸವ ನಡೆಯಲಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>